**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ ಸೋಜಾ ರವರ ನಿಯಮ 72ನೇ ನಿಯಮದ ಮೇರೆಗೆ ಗಮನ ಸೆಳೆಯುವ ಸೂಚನೆಗೆ ಉತ್ತರ ನೀಡುವ ಬಗ್ಗೆ.</u>**

**<u>ಸೂಚನೆ:</u>** ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿರುವ ದ.ಕ ಜಿಲ್ಲೆ ಪೊಲೀಸ್ ವರಿಷ್ಠಾಧಿಕಾರಿ ಕಛೇರಿಯನ್ನು ನಗರಪಾಲಿಕೆ ಪೊಲೀಸ್ ಆಯುಕ್ತರ ವ್ಯಾಪ್ತಿಯಿಂದ ಹೊರವಲಯಕ್ಕೆ ಸ್ಥಳಾಂತರಿಸಲು ನಿರ್ಣಯವಾಗಿದ್ದರು ಇದುವರೆಗೆ ಸ್ಥಳಾಂತರಗೊಳ್ಳದೇ ಇರುವ ಅಡಚಣೆಗಳ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**<u>ಉತ್ತರ:</u>** ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿರುವ ದ.ಕ ಜಿಲ್ಲೆ ಪೊಲೀಸ್ ವರಿಷ್ಠಾಧಿಕಾರಿ ಕಛೇರಿಯನ್ನು ನಗರಪಾಲಿಕೆ ಪೊಲೀಸ್ ಆಯುಕ್ತರ ವ್ಯಾಪ್ತಿಯಿಂದ ಹೊರವಲಯಕ್ಕೆ ಸ್ಥಳಾಂತರಿಸಲು ನಿರ್ಣಯವಾಗಿರುವುದಿಲ್ಲ. ಹೊರವಲಯಕ್ಕೆ ಪೊಲೀಸ್ ಅಧೀಕ್ಷಕರ ಕಛೇರಿಗೆ ಸ್ಥಳಾಂತರಿಸಲು ಸ್ಥಳ ಕಾಯ್ದಿರಿಸಿರುವುದಿಲ್ಲ ಹಾಗೂ ಪೊಲೀಸ್ ಅಧೀಕ್ಷಕರ ಕಛೇರಿಯನ್ನು ಹೊರವಲಯಕ್ಕೆ ಸ್ಥಳಾಂತರಿಸುವ ಬಗ್ಗೆ ಸರ್ಕಾರಕ್ಕೆ ಯಾವುದೇ ಪ್ರಸ್ತಾವನೆಯನ್ನು ಸಲ್ಲಿಸಿರುವುದಿಲ್ಲ.

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು, ಸುಳ್ಯ ಹಾಗೂ ಕಡಬ ತಾಲೂಕುಗಳ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿನ ಕಾನೂನು ಸುವ್ಯವಸ್ಥೆ ಹಿತದೃಷ್ಟಿಯಿಂದ ಪುತ್ತೂರಿನಲ್ಲಿ ಈಗಾಗಲೇ ಸಹಾಯಕ ಪೊಲೀಸ್ ಅಧೀಕ್ಷಕರ ಕಛೇರಿಯು ಕಾರ್ಯನಿರ್ವಹಿಸುತ್ತಿದೆ. ಅದೇ ರೀತಿ ಬಂಟ್ವಾಳ ಹಾಗೂ ಬೆಳ್ತಂಗಡಿ ತಾಲೂಕಿಗೆ ಸಂಬಂಧಪಟ್ಟಂತೆ ಬಂಟ್ವಾಳದಲ್ಲಿ ಪೊಲೀಸ್ ಉಪಾಧೀಕ್ಷಕರ ಕಛೇರಿಯು ಕಾರ್ಯನಿರ್ವಹಿಸುತ್ತಿದೆ.

ಜಿಲ್ಲಾಧಿಕಾರಿಗಳ ಕಛೇರಿ, ಜಿಲ್ಲಾ ಪಂಚಾಯತ್ ಕಚೇರಿ, ಹಿಂದುಳಿದ ವರ್ಗಗಳ ಇಲಾಖೆ, ಸಮಾಜ ಕಲ್ಯಾಣ ಇಲಾಖೆಯಂತಹ ಜಿಲ್ಲಾ ಮಟ್ಟದ ಕಛೇರಿಗಳು ಮಂಗಳೂರಿನಲ್ಲಿಯೇ ಕಾರ್ಯ ನಿರ್ವಹಿಸುತ್ತಿರುವುದರಿಂದ ಜಿಲ್ಲಾ ಪೊಲೀಸ್ ಕಛೇರಿಗೆ ಬರುವಂತಹ ಸಾರ್ವಜನಿಕರು ಸದರಿ ಕಛೇರಿಗಳಿಗೂ ತೆರಳಿ ತಮ್ಮ ಕೆಲಸ ಕಾರ್ಯಗಳನ್ನು ಮಾಡಿಕೊಂಡು ಹೋಗುತ್ತಿರುತ್ತಾರೆ. ಅಲ್ಲದೇ ತುರ್ತು ಸಂದರ್ಭದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಆಡಳಿತಾತ್ಮಕ ವಿಷಯಗಳ ಬಗ್ಗೆ ಸಮಾಲೋಚನೆ ನಡೆಸಲು ಅನುಕೂಲಕರವಾಗಿರುತ್ತದೆ. ಜಿಲ್ಲಾ ಪೊಲೀಸ್ ಕಛೇರಿಯನ್ನು ಹೊರವಲಯಕ್ಕೆ ಸ್ಥಳಾಂತರಿಸುವುದರ ಜೊತೆಗೆ ಇತರ ಜಿಲ್ಲಾ ಮಟ್ಟದ ಕಛೇರಿಗಳನ್ನು ಸಹ ಸ್ಥಳಾಂತರಿಸಿದಲ್ಲಿ ಮಾತ್ರ ಅನುಕೂಲವಾಗಬಹುದು.

ಹುಬ್ಬಳ್ಳಿ ಧಾರವಾಡ, ಮೈಸೂರು, ಬೆಳಗಾವಿ, ಗುಲ್ಬರ್ಗಾದಲ್ಲಿಯೂ ಸಹ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಛೇರಿಗಳು ನಗರ ಪಾಲಿಕೆಯ ಪೊಲೀಸ್ ಆಯುಕ್ತರ ವ್ಯಾಪ್ತಿಯಲ್ಲೇ ಕಾರ್ಯ ನಿರ್ವಹಿಸುತ್ತಿರುತ್ತದೆ.

(ಡಾ॥ ಜಿ. ಪರಮೇಶ್ವರ)
ಗೃಹ ಸಚಿವರು

**ಸಂಖ್ಯೆ: ಹೆಚ್‌ಡಿ 83 ಪಿಬಿಎಲ್ 2024**